# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 422(485) |
| ಸದಸ್ಯರ ಹೆಸರು : | ಡಾ: ಆರತಿ ಕೃಷ್ಣ (ನಾಮನಿರ್ದೇಶಿತರು) |
| ಉತ್ತರಿಸುವ ದಿನಾಂಕ: | 30.01.2026 |
| ಉತ್ತರಿಸುವವರು : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

******

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣ ಆಸ್ತಿಗಳ ಡಿಜಿಟಲೀಕರಣ, ಪಾರದರ್ಶಕತೆ ಮತ್ತು ವಂಚನೆ ತಡೆಯುವ ಉದ್ದೇಶದಿಂದ ಆನ್‌ಲೈನ್ ಇ-ಸ್ವತ್ತು (E-Swathu) ಪೋರ್ಟಲ್ ಮುಖಾಂತರ ಫಾರ್ಮ್-9 ಮತ್ತು ಫಾರ್ಮ್-11 (ಇ-ಖಾತೆ) ಗಳನ್ನು ಪಡೆಯಲು ಪ್ರಸ್ತುತ ಕರ್ನಾಟಕ ಸರ್ಕಾರ ಅವಕಾಶ ಮಾಡಿಕೊಟ್ಟಿದ್ದು, ಇದನ್ನು ಪಡೆಯಲು ಗ್ರಾಮ-ಒನ್ ಸೇವಾ ಕೇಂದ್ರ ಅಥವಾ ಬೇರಾವುದೇ ಸೇವಾ ಕೇಂದ್ರಗಳ ಮೂಲಕ ಇಲಾಖೆಗೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡಲಾಗಿದೆಯೇ;<br>ಹಾಗಿದ್ದಲ್ಲಿ, ಫಲಾನುಭವಿಗಳು ಸೇವಾ ಕೇಂದ್ರಕ್ಕೆ ಪಾವತಿಸಲು ನಿಗದಿಪಡಿಸಿರುವ ಶುಲ್ಕವೆಷ್ಟು; ನಿಗದಿಪಡಿಸಿರುವುದಕ್ಕಿಂತ ಹೆಚ್ಚಿನ ಶುಲ್ಕ ಪಡೆಯುತ್ತಿರುವ ಹಾಗೂ ಆ ಶುಲ್ಕ ಪಾವತಿಸದವರ ಅರ್ಜಿಗಳನ್ನು ಇಲ್ಲಸಲ್ಲದ ಕಾರಣಗಳು ಹೇಳಿ ನಿರಾಕರಿಸುತ್ತಿರುವ ಸೇವಾ ಕೇಂದ್ರಗಳಿಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ; | ಪ್ರಸ್ತುತ, ಇ-ಸ್ವತ್ತು ತಂತ್ರಾಂಶದ ಮೂಲಕ ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ, ಗ್ರಾಮ ಪಂಚಾಯತಿಗಳ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಅರ್ಜಿಗಳನ್ನು ಸಲ್ಲಿಸಲು ಅನುವು ಮಾಡಿಕೊಡಲಾಗಿದೆ. ಹಾಗೂ ಈವರೆಗೆ ಅರ್ಜಿ ಸಲ್ಲಿಕೆಗೆ ಯಾವುದೇ ಶುಲ್ಕವನ್ನು ನಿಗದಿಪಡಿಸಿರುವುದಿಲ್ಲ.<br>ಇ-ಸ್ವತ್ತು ತಂತ್ರಾಂಶದ ಆನ್-ಲೈನ್ ಮೂಲಕ ಗ್ರಾಮಠಾಣ ಆಸ್ತಿಗಳಿಗೆ ಅರ್ಜಿಗಳನ್ನು ಸಲ್ಲಿಸುವ ಬಗ್ಗೆ ರೂ.800/- ಗಳ ಮೋಜಿನಿ ಶುಲ್ಕವನ್ನು ಪಾವತಿಸಲು ನಿಗಧಿಪಡಿಸಲಾಗಿದೆ.<br>ಸಲ್ಲಿಸಿದ ಅರ್ಜಿಗಳು ಅನುಮೋದನೆಗೊಂಡ ನಂತರ, ರೂ.50/- ಗಳ ಪ್ರಿಟಿಂಗ್ ಶುಲ್ಕ ಮತ್ತು ಆಸ್ತಿ ತೆರಿಗೆಯನ್ನು ಪಾವತಿಸಿ, ಆನ್-ಲೈನ್ ಮೂಲಕ ಇ-ಖಾತಾವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅನುವು ಮಾಡಿಕೊಡಲಾಗಿದೆ. |
| (ಆ) | ಆನ್‌ಲೈನ್ ಇ-ಸ್ವತ್ತು (E-Swathu) ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಲು ಆಗುತ್ತಿರುವ ತಾಂತ್ರಿಕ ವಿಳಂಬಕ್ಕೆ ಪರ್ಯಾಯವಾಗಿ, ಫಲಾನುಭವಿ ವ್ಯಕ್ತಿಗಳೆ ನೇರವಾಗಿ ಮೊಬೈಲ್ ಆಪ್ ಮೂಲಕ ಸರಳ | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ಅನ್ನು ಅಧಿಸೂಚಿಸಲಾಗಿರುತ್ತದೆ. ಸದರಿ ನಿಯಮಗಳನ್ವಯ |

| | | |
|---|---|---|
| | ರೀತಿಯಲ್ಲಿ ಅರ್ಜಿ ಸಲ್ಲಿಸಲು ಇಲಾಖೆಯಿಂದ ಅವಕಾಶ ಮಾಡಿಕೊಡಲಾಗಿದೆಯೇ; ಆಗಿದ್ದಲ್ಲಿ, ಇದರ ಬಗ್ಗೆ ಗ್ರಾಮ ಪಂಚಾಯತಿ ಮಟ್ಟದಲ್ಲಿ ಸೂಕ್ತ ಜಾಹೀರಾತು ಮುಖಾಂತರ ಪ್ರಚಾರ ಕೈಗೊಳ್ಳಬಹುದೇ? | ಈ ಹಿಂದೆ ಇದ್ದ ಇ-ಸ್ವತ್ತು ತಂತ್ರಾಂಶವನ್ನು ನಾಗರೀಕ ಸ್ನೇಹಿಯಾಗಿ ಮಾರ್ಪಡಿಸಲಾಗಿದ್ದು, ದಿನಾಂಕ:01.12.2025 ರಂದು ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು ಇ-ಸ್ವತ್ತು 2.0 ತಂತ್ರಾಂಶಕ್ಕೆ ಚಾಲನೆ ನೀಡಿರುತ್ತಾರೆ.<br>ಇ-ಸ್ವತ್ತು ತಂತ್ರಾಂಶದ Citizen Interface ನ ಮೂಲಕ ಅರ್ಜಿದಾರರಿಗೆ ನೇರವಾಗಿ ಆನ್-ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ.<br>ಇ-ಸ್ವತ್ತು 2.0 ತಂತ್ರಾಂಶದ ತಾಂತ್ರಿಕ ಮತ್ತು ಆಡಳಿತಾತ್ಮಕ ಸಮಸ್ಯೆಗಳನ್ನು ನೋಂದಾಯಿಸಲು ಮತ್ತು ಅರ್ಜಿ ಸಲ್ಲಿಸಲು, ಸಂಬಂಧಿತ ದಾಖಲಾತಿ / ಪ್ರಕ್ರಿಯೆಯಲ್ಲಿ / ತಂತ್ರಾಂಶದ ಬಳಕೆಯ ಕುರಿತು ಮಾಹಿತಿಯನ್ನು ಪಡೆಯಲು ರಾಜ್ಯ ಮಟ್ಟದಲ್ಲಿ ದಿನಾಂಕ:01.12.2026 ರಿಂದ ಸಹಾಯವಾಣಿ (9483476000) ಯನ್ನು ಸ್ಥಾಪಿಸಲಾಗಿದೆ. ಸದರಿ ಸಹಾಯವಾಣಿಯ ಮೂಲಕ ಅರ್ಜಿದಾರರು ಅರ್ಜಿಗಳನ್ನು ಸಲ್ಲಿಸಲು ಬೇಕಾದ ತಾಂತ್ರಿಕ ಬೆಂಬಲವನ್ನು ನೀಡಲಾಗುತ್ತಿದೆ. ಇ-ಸ್ವತ್ತು 2.0 ತಂತ್ರಾಂಶದಡಿ ಸಾರ್ವಜನಿಕರಿಂದ ಇದುವರೆಗೆ ಒಟ್ಟು **44,508** ಅರ್ಜಿಗಳು ಸ್ವೀಕೃತವಾಗಿವೆ. ಇದರಲ್ಲಿ ಹೊಸ ತಂತ್ರಾಂಶದ ಮೂಲಕ **21,037** ಅರ್ಜಿಗಳು ಹಾಗೂ ಹಳೆಯ ತಂತ್ರಾಂಶದ ಮೂಲಕ **23,471** ಅರ್ಜಿಗಳು ಸಲ್ಲಿಕೆಯಾಗಿದೆ.<br>ಸಾರ್ವಜನಿಕರಿಗೆ ಮತ್ತು ಬಳಕೆದಾರರಿಗೆ ಅನುಕೂಲವಾಗುವಂತೆ ಇ-ಸ್ವತ್ತು ತಂತ್ರಾಂಶ ದಲ್ಲಿರುವ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ, ಮತ್ತಷ್ಟು ಸರಳೀಕರಿಸಲು ಕ್ರಮವಹಿಸಲಾಗುತ್ತಿದೆ.<br>ಈ ಬಗ್ಗೆ ಇಲಾಖೆಯಿಂದ ದಿನಪತ್ರಿಕೆ ಮತ್ತು Social Media ಮೂಲಕ ಪ್ರಚಾರ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಪ್ರಚಾರ ಗೊಳಿಸಲಾಗುವುದು. |

ಸಂಖ್ಯೆ: ಗ್ರಾಅಪ/22/ಇ-ಆಡಳಿತ/2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ ಸಚಿವರು.